ವಿ-330 (14)

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ **ಶ್ರೀ ಮರಿತಿಬ್ಬೇಗೌಡ**, ಇವರು ನಿಯಮ-330 ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.

ವಿಷಯ:-

ದಿನಾಂಕ:01/04/2006 ನಂತರ ಅನುದಾನಿತ ಶಾಲಾ ಕಾಲೇಜುಗಳಲ್ಲಿ ನೇಮಕಗೊಂಡಿರುವ ಬೋಧಕ/ಬೋಧಕೇತರ ಸಿಬ್ಬಂದಿಗೆ ಹೊಸ ಪಿಂಚಣಿ ಯೋಜನೆಯನ್ನು ಜಾರಿಗೆ ತರಲಾಗಿದ್ದರೂ ಈ ಹೊಸ ಪಿಂಚಣಿ ಯೋಜನೆಯ ಸವಲತ್ತುಗಳನ್ನು ಸದರಿಯವರಿಗೆ ಇದುವರೆವಿಗೂ ದೊರೆಯದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಬಗ್ಗೆ ಪ್ರಸ್ತಾಪಿಸಲಾಗಿದೆ.

ಉತ್ತರ:-

ದಿನಾಂಕ:01.04.2006 ರ ನಂತರ ನೇಮಕಾತಿ ಹೊಂದಿದ ಸಿಬ್ಬಂದಿಗಳಿಗೆ ಕಡ್ಡಾಯವಾಗಿ ಸರ್ಕಾರದ ಆದೇಶ ಸಂಖ್ಯೆ: FD (SPL)04 PET 2005, ದಿನಾಂಕ: 31.03.2006ರನ್ವಯ ನೂತನ ಪಿಂಚಣಿ ವ್ಯಾಪ್ತಿಗೆ ಒಳಪಡುತ್ತಾರೆ. ಸರ್ಕಾರದ ಆದೇಶ ಸಂಖ್ಯೆ: ಆಇ 34 ಪಿ ಇ ಎನ್ 2018, ದಿನಾಂಕ:23.06.2018 ರಲ್ಲಿ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ನಿವೃತ್ತಿ ಉಪದಾನ, ಮರಣ ಉಪದಾನ ಮತ್ತು ಕುಟುಂಬ ಪಿಂಚಣಿಯನ್ನು ವಿಸ್ತರಿಸಲಾಗಿದೆ.

**ಅನುದಾನಿತ ಸಿಬ್ಬಂದಿಗಳಿಗೆ** :

ದಿನಾಂಕ:01.04.2006 ರ ಪಿಂಚಣಿ ನೀತಿಯಲ್ಲಿ ಸರ್ಕಾರಿ ಅನುದಾನಿತ ಶಾಲೆಗಳ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಮೇಲ್ಕಂಡ ಸರ್ಕಾರದ ಆದೇಶದ ಕ್ರಮ ಸಂಖ್ಯೆ: 08ರಲ್ಲಿ ಈ ಕೆಳಗಿನಂತೆ ಆದೇಶಿಸಿದೆ.

...(8) ಸಹಾಯಾನುದಾನ ಶಿಕ್ಷಣ ಸಂಸ್ಥೆಗಳ ನೌಕರರಿಗೆ, ಗೊತ್ತು ಮಾಡಿದ ಪ್ರಯೋಜನ ಪಿಂಚಣಿಯನ್ನು ದಿನಾಂಕ:01.04.2006ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿಬಿಡತಕ್ಕದ್ದು. ನೂತನ ನಿಗಧಿತ ವಂತಿಗೆ ಪಿಂಚಣಿ ಯೋಜನೆಯು, ಆಯ್ಕೆಯ ಅವಕಾಶದ ಆಧಾರದ ಮೇಲೆ ನೌಕರನಿಗೆ ಮತ್ತು ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು ಆಯ್ಕೆಯ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕುದು. ಆದರೆ, ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಸಂಸ್ಥೆಗಳು ಭರಿಸತಕ್ಕುದು. ಆದರೆ ರಾಜ್ಯ ಸರ್ಕಾರವಲ್ಲ.

- ಈ ಆದೇಶವು ದಿನಾಂಕ: 01/04/2006ರಿಂದ ಜಾರಿಗೆ ಬಂದಿರುತ್ತದೆ.
- ದಿನಾಂಕ: 01/04/2006ರ ನಂತರ ಅನುದಾನಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ.
- ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ 2006 ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01/04/2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಒಳಪಡುತ್ತಾರೆ.
- ಈ ಪಿಂಚಣಿ ಯೋಜನೆಯು ಸಂಪೂರ್ಣವಾಗಿ ಸ್ವ-ಇಚ್ಛಾ (optional) ನೆಲೆಯಲ್ಲಿ ಜಾರಿಗೊಳಿಸುವುದರಿಂದ ಕಡ್ಡಾಯಗೊಳಿಸಲು ಅವಕಾಶವಿರುವುದಿಲ್ಲ.

ಸಂಖ್ಯೆ: ಇಪಿ 268ಎಸ್ ಇಎಸ್ 2020

(ಎಸ್.ಸುರೇಶ್‌ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು